# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 149

2) ಸದಸ್ಯರ ಹೆಸರು : ಪ್ರಕಾಶ್ ಬಾಬಣ್ಣ ಹುಕ್ಕೇರಿ

3) ಉತ್ತರಿಸಬೇಕಾದ ದಿನಾಂಕ: : 23.07.2024 15-07-2024

4) ಉತ್ತರಿಸುವವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು .

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಬೆಂಗಳೂರಿನಿಂದ ಹುಬ್ಬಳ್ಳಿ-ಧಾರವಾಡಕ್ಕೆ ಹಾಗೂ ಧಾರವಾಡ - ಹುಬ್ಬಳ್ಳಿಯಿಂದ ಬೆಂಗಳೂರಿಗೆ ಹೋಗುವ-ಬರುವ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲಿನ ಸೇವೆಯನ್ನು ಬೆಳಗಾವಿಯವರೆಗೆ ವಿಸ್ತರಿಸಲಾಗಿದೆಯೇ; ಇಲ್ಲದಿದ್ದಲ್ಲಿ ಕಾರಣವೇನು; | ವಂದೇ ಭಾರತ್ ಎಕ್ಸ್‌ಪ್ರೆಸ್ ಯೋಜನೆಯು ಕೇಂದ್ರ ಸರ್ಕಾರದ ಯೋಜನೆಯಾಗಿದ್ದು, ರೈಲ್ವೆ ಇಲಾಖೆಯಿಂದ ಪಡೆದ ಮಾಹಿತಿ ಈ ಕೆಳಕಂಡಂತೆ ಇದೆ:<br>ಧಾರವಾಡದಿಂದ ಬೆಳಗಾವಿಯವರೆಗೆ ವಂದೇ ಭಾರತ ಎಕ್ಸ್‌ಪ್ರೆಸ್ ರೈಲಿನ ಸೇವೆಯನ್ನು ವಿಸ್ತರಿಸಲು ಸದ್ಯಕ್ಕೆ ಬೆಳಗಾವಿಯಲ್ಲಿರುವ ಮೂಲಭೂತ ಸೌಕರ್ಯಗಳು ಸಮರ್ಪಕವಾಗಿರುವುದಿಲ್ಲ. ಆದ್ದರಿಂದ, ಪ್ರಸ್ತುತ ಈ ವಂದೇ ಭಾರತ ಎಕ್ಸ್‌ಪ್ರೆಸ್ ರೈಲಿನ ಸೇವೆಯನ್ನು ವಿಸ್ತರಿಸಲು ಕಾರ್ಯಸಾಧ್ಯವಿರುವುದಿಲ್ಲ. |
| (ಆ) | ಬೆಂಗಳೂರಿನಿಂದ ಹುಬ್ಬಳ್ಳಿ-ಧಾರವಾಡಕ್ಕೆ ಹೊರಡುವ ವಂದೇ ಭಾರತ್ ಎಕ್ಸ್‌ಪ್ರೆಸ್ ಸೇವೆಯನ್ನು ಬೆಳಗಾವಿಯವರೆಗೆ ವಿಸ್ತರಿಸುವ ಸಂಬಂಧ ಕೇಂದ್ರ ರೈಲ್ವೆ ಮಂಡಳಿಯು ಆದೇಶ ಹೊರಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇಲ್ಲಿಯವರೆಗೆ ಸದರಿ ಸೇವೆಯನ್ನು ಬೆಳಗಾವಿಯವರೆಗೆ ವಿಸ್ತರಿಸದಿರಲು ಕಾರಣವೇನು; | ರೈಲ್ವೆ ಇಲಾಖೆಯಿಂದ ಪಡೆದ ಮಾಹಿತಿಯ ಅನುಸಾರ ರೈಲ್ವೆ ಮಂಡಳಿಯು ವಂದೇ ಭಾರತ ಎಕ್ಸ್‌ಪ್ರೆಸ್ ರೈಲು ಸೇವೆಯನ್ನು ಬೆಳಗಾವಿಯವರೆಗೆ ವಿಸ್ತರಿಸಲು ದಿನಾಂಕ: 14-11-2023 ರಂದು ಸಂಖ್ಯೆ: 2023/Chg/16/57 ಅಧಿಸೂಚನೆಯನ್ನು ಹೊರಡಿಸಿರುತ್ತದೆ. ಆದರೆ ವಾಸ್ತವದಲ್ಲಿ, ಈ ರೈಲಿನ ವಿಸ್ತರಣೆಯೂ ಆಗಿರುವುದಿಲ್ಲ. ದಿನಾಂಕ: 21.11.2023 ರಂದು ಬೆಂಗಳೂರಿನಿಂದ ಬೆಳಗಾವಿಯವರೆಗೆ ಹಾಗೂ ಬೆಳಗಾವಿಯಿಂದ ಬೆಂಗಳೂರಿಗೆ ಟ್ರಯಲ್ ರನ್ ಮಾಡಲಾಗಿದ್ದು, ಈ ಟ್ರಯಲ್ ರನ್‌ನ ದಾಖಲೆ/ ಅವಲೋಕನಗಳನ್ನು ರೈಲ್ವೆ ಮಂಡಳಿಗೆ ಈಗಾಗಲೇ ಕಳುಹಿಸಲಾಗಿರುತ್ತದೆ. ರೈಲ್ವೆ ಇಲಾಖೆಯಿಂದ ರೈಲ್ವೆ ಮಂಡಳಿಯ ಮಾಹಿತಿ/ಆದೇಶವನ್ನು ನಿರೀಕ್ಷಿಸಲಾಗುತ್ತಿದೆ ಎಂದು ತಿಳಿಸಿರುತ್ತಾರೆ. |
| (ಇ) | ಈ ರೈಲಿನ ಸೇವೆಯನ್ನು ಬೆಳಗಾವಿಯವರೆಗೆ ವಿಸ್ತರಿಸುವ ಸಂಬಂಧ ಸರ್ಕಾರವು ಕೈಗೊಂಡಿರುವ ಕ್ರಮಗಳಾವುವು? (ಸಂಪೂರ್ಣ ವಿವರ ನೀಡುವುದು) | |

ಸಂಖ್ಯೆ: ಮೂಅಇ 137 ರಾರಾಹೆ 2024/ಇ

(ಎಂ.ಬಿ.ಪಾಟೀಲ)
ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ
ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.